**National**
**Kannada**
**28.09.2024 / 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಜಮ್ಮು-ಕಾಶ್ಮೀರ, ಹರಿಯಾಣ ವಿಧಾನಸಭಾ ಚುನಾವಣೆ; ಪ್ರಧಾನಿ ಸೇರಿದಂತೆ ವಿವಿಧ ಪಕ್ಷಗಳ ನಾಯಕರಿಂದ ಪ್ರಚಾರ

೨. ನಾಳೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ೧೧೪ನೇ ಆವೃತ್ತಿಯ 'ಮನ್ ಕಿ ಬಾತ್'

೩. ಲೆಬನಾನ್ ವಿರುದ್ಧ ಮುಂದುವರಿದ ಇಸ್ರೇಲ್ ವಾಯುದಾಳಿ; ಹೆಜ್ಬುಲ್ಲಾ ನಾಯಕ ಹಸನ್ ನಸ್ರುಲ್ಲಾ ಹತ್ಯೆ

೪. ಮೆಕಾವ್ ಓಪನ್ ಬ್ಯಾಡ್ಮಿಂಟನ್; ಮಹಿಳೆಯರ ಡಬಲ್ಸ್ ವಿಭಾಗದ ಸೆಮಿಫೈನಲ್ಸ್ ಪಂದ್ಯದಲ್ಲಿ ಭಾರತದ ತ್ರೀಸಾ-ಗಾಯತ್ರಿ ಜೋಡಿ ಪರಾಭವ

**<><*<><>*><>**

ಜಮ್ಮು ಮತ್ತು ಕಾಶ್ಮೀರದಲ್ಲಿ ಮೂರನೇ ಹಾಗೂ ಅಂತಿಮ ಹಂತ ಮತ್ತು ಹರಿಯಾಣದಲ್ಲಿ ನಡೆಯಲಿರುವ ಒಂದು ಹಂತದ ವಿಧಾನಸಭಾ ಚುನಾವಣೆಗಾಗಿ ರಾಜಕೀಯ ಪಕ್ಷಗಳು ತಮ್ಮ ಪ್ರಚಾರವನ್ನು ತೀವ್ರಗೊಳಿಸಿವೆ. ಜಮ್ಮು ಮತ್ತು ಕಾಶ್ಮೀರದ ೪೦ ವಿಧಾನಸಭಾ ಕ್ಷೇತ್ರಗಳಿಗೆ ಇದೇ ಮಂಗಳವಾರ ಅಂತಿಮ ಹಂತದ ಮತದಾನ ನಡೆಯಲಿದೆ. ಮತದಾರರನ್ನು ಸೆಳೆಯಲು ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಸತತವಾಗಿ ರ್‍ಯಾಲಿ ಮತ್ತು ರೋಡ್ ಶೋಗಳನ್ನು ನಡೆಸುತ್ತಿದ್ದಾರೆ. ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಜಮ್ಮುವಿನಲ್ಲಿಂದು ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಿ, ಜಮ್ಮು-ಕಾಶ್ಮೀರದ ಜನರಿಗೆ ಶಾಂತಿ ಮತ್ತು ತಮ್ಮ ಮಕ್ಕಳ ಉತ್ತಮ ಭವಿಷ್ಯ ಮುಖ್ಯವಾಗಿದೆ. ಕಳೆದ ೨ ಹಂತದ ಮತದಾನದಲ್ಲಿ ದಾಖಲೆಯ ಮತದಾನ ಇದಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು. ೨೦೧೪ರಿಂದ ನಮ್ಮ ಸರ್ಕಾರ ಭಾರತೀಯ ಸೇನೆಯ ಅಧಿಕಾರಿ ಮತ್ತು ಸಿಬ್ಬಂದಿಗಾಗಿ 'ಒಂದು ಶ್ರೇಣಿ ಒಂದು ಪಿಂಚಣಿ' ಯೋಜನೆ ಜಾರಿಗೊಳಿಸಿತು. ಸೇನಾ ಅಧಿಕಾರಿ ಮತ್ತು ಸಿಬ್ಬಂದಿಯ ಕುಟುಂಬದವರು, ಇದುವರೆಗೂ ೧ ಲಕ್ಷ ೨೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತವನ್ನು ಪಡೆದಿದ್ದಾರೆ. ಅಲ್ಲದೇ, ನಾವು ಈ ಯೋಜನೆಯನ್ನು ಮರು ಪರಿಶೀಲನೆ ಸಹ ಮಾಡಿದ್ದು, ಇದರಿಂದ ಸೇನಾ ಅಧಿಕಾರಿ ಮತ್ತು ಸಿಬ್ಬಂದಿಯ ಕುಟುಂಬದವರು ಹೆಚ್ಚಿನ ಮೊತ್ತವನ್ನು ಪಡೆಯಲಿದ್ದಾರೆ ಎಂದು ತಿಳಿಸಿದರು. ೨೦೧೬ರಲ್ಲಿ ಇದೇ ದಿನ ಪಾಕಿಸ್ತಾನದ ವಿರುದ್ಧ ಭಾರತ, ಸರ್ಜಿಕಲ್ ದಾಳಿ ನಡೆಸಿತು ಎಂದು ಪ್ರಧಾನಿ ನರೇಂದ್ರ ಮೋದಿ ಸ್ಮರಿಸಿದರು.

**<><*<><>*><>**

ಇನ್ನೊಂದೆಡೆ, ಪ್ರಧಾನಿ ನರೇಂದ್ರ ಮೋದಿ ಇಂದು ಹರಿಯಾಣದ ಹಿಸಾರ್‌ನಲ್ಲಿ ಬಿಜೆಪಿಯ ಜನಾಶೀರ್ವಾದ ರ್‍ಯಾಲಿ ಉದ್ದೇಶಿಸಿ ಮಾತನಾಡಿದರು. ಕಾಂಗ್ರೆಸ್ ಅಧಿಕಾರದಲ್ಲಿರುವ ರಾಜ್ಯದಲ್ಲಿ ಸುಸ್ಥಿರತೆ ಸಾಧ್ಯವಿಲ್ಲ. ಕಾಂಗ್ರೆಸ್ ಸುಳ್ಳು ಭರವಸೆಗಳನ್ನು ನೀಡಿ ಚುನಾವಣೆ ನಂತರ ನುಣುಚಿಕೊಳ್ಳುತ್ತದೆ ಎಂದು ಆರೋಪಿಸಿದರು. ಕಾಂಗ್ರೆಸ್‌ಗೆ ಮತ ಬಿಟ್ಟು ಬೇರೇನೂ ಕಾಣಿಸುತ್ತಿಲ್ಲ. ಆದರೆ ಬಿಜೆಪಿ ವಂಚಿತರನ್ನು ಬೆಂಬಲಿಸಿ, ಅವರ ಕನಸಿಗೆ ರೆಕ್ಕೆಪುಕ್ಕ ನೀಡುತ್ತದೆ ಎಂದರು. ಬಿಜೆಪಿ ರೈತರ ಸಮಸ್ಯೆಗಳನ್ನು ಪರಿಹರಿಸುತ್ತಿದೆ. ಕಾಂಗ್ರೆಸ್ ರೈತರನ್ನು ಮತಬ್ಯಾಂಕ್ ಆಗಿ ನೋಡುತ್ತಿದೆ. ಬೆಳೆಗಳ ಕನಿಷ್ಠ ಬೆಂಬಲ ಬೆಲೆ ಬಗ್ಗೆ ಕಾಂಗ್ರೆಸ್ ಸುಳ್ಳು ಹೇಳುತ್ತಿದೆ ಎಂದು ಆರೋಪಿಸಿದ ಅವರು, ಹರಿಯಾಣದಲ್ಲಿ ಬಿಜೆಪಿ ಸರ್ಕಾರ, ಕನಿಷ್ಠ ಬೆಂಬಲ ಬೆಲೆಯಲ್ಲಿ ೨೪ ಬೆಳೆಗಳನ್ನು ಖರೀದಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ಹವಾಮಾನ ಬದಲಾವಣೆ ಸಮಸ್ಯೆ ನಿಭಾಯಿಸಲು ಮರಗಳು ನೆರವಾಗುತ್ತವೆ ಎಂದು ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆ ಸಚಿವ ರಾಜೀವ್ ರಂಜನ್ ಹೇಳಿದ್ದಾರೆ. ರಂಜನ್ ಅವರು ನವದೆಹಲಿಯಲ್ಲಿಂದು 'ಏಕ್ ಪೆಡ್ ಮಾ ಕೆ ನಾಮ್' ಅಭಿಯಾನದಡಿ ಗಿಡ ನೆಡುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪರಿಸರ ಮತ್ತು ಭವಿಷ್ಯದ ಪೀಳಿಗೆಯ ಸುಧಾರಣೆಗೆ ಸರ್ಕಾರ ಬದ್ಧವಾಗಿದೆ ಎಂದರು. 'ತಾಯಿಯ ಹೆಸರಿನಲ್ಲಿ ಒಂದು ಸಸಿ' ಉಪಕ್ರಮವನ್ನು ಶ್ಲಾಘಿಸಿದ ಅವರು, ಅಧಿಕ ಸಂಖ್ಯೆಯಲ್ಲಿ ಗಿಡ ನೆಡುವಂತೆ ಕರೆ ನೀಡಿದರು. ಈ ಬೃಹತ್ ಅಭಿಯಾನದ ಕುರಿತು ಜನಜಾಗೃತಿ ಮೂಡಿಸುವಂತೆ ಮಕ್ಕಳಿಗೆ ಸಲಹೆ ಮಾಡಿದರು. ಈ ಸಂದರ್ಭದಲ್ಲಿ ಸಚಿವ ರಂಜನ್ ಮತ್ತು ಕೇಂದ್ರ ಮೀನುಗಾರಿಕೆ, ಪಶುಸಂಗೋಪನೆ ಮತ್ತು ಹೈನುಗಾರಿಕೆಯ ರಾಜ್ಯ ಸಚಿವ ಜಾರ್ಜ್ ಕುರಿಯನ್ ಸಸಿ ನೆಟ್ಟರು. ಇನ್ನೊಂದೆಡೆ, ಕೇಂದ್ರ ಮಾಹಿತಿ ಪ್ರಸಾರ ಮತ್ತು ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಡಾ. ಎಲ್.ಮುರುಗನ್, ಚೆನ್ನೈನಲ್ಲಿಂದು 'ಏಕ್ ಪೇಡ್ ಮಾ ಕೆ ನಾಮ್' ಅಭಿಯಾನದಲ್ಲಿ ಪಾಲ್ಗೊಂಡರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ೧೦ ವರ್ಷಗಳಿಂದ, ರಾಷ್ಟ್ರದ ಬೆಳವಣಿಗೆ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರವು ಕಟಿಬದ್ಧವಾಗಿದೆ. ಮುಂದಿನ ೨೫ ವರ್ಷಗಳಲ್ಲಿ, ಎಕ್ಸ್‌ಪ್ರೆಸ್ ಹೆದ್ದಾರಿಗಳು, ಕೈಗಾರಿಕಾ ಕಾರಿಡಾರ್ ಮತ್ತು ಎಲ್ಲಾ ಬಂದರುಗಳ ಅಭಿವೃದ್ಧಿಯ ಸ್ಪಷ್ಟ ಚಿತ್ರಣ ನೀಡಲಾಗಿದೆ. ವಿಮಾನ ನಿಲ್ದಾಣಗಳನ್ನು ಉನ್ನತೀಕರಣಗೊಳಿಸಲಾಗಿದೆ ಎಂದು ಅವರು ಹೇಳಿದರು. ತಮಿಳುನಾಡಿನ ಅಭಿವೃದ್ಧಿಯಲ್ಲಿ ಕೇಂದ್ರ ಸರ್ಕಾರ ಪ್ರಮುಖ ಪಾತ್ರ ವಹಿಸಿದೆ ಎಂದ ಸಚಿವರು, ಮೇಕ್ ಇನ್ ಇಂಡಿಯಾ ಯೋಜನೆಯಡಿ, ರಕ್ಷಣಾ ಸಾಮಗ್ರಿಗಳ ತಯಾರಿಕೆ ಹಾಗೂ ರಫ್ತು ಕ್ಷೇತ್ರಗಳಲ್ಲಿ ಕೈಗೊಂಡಿರುವ ವಿವಿಧ ಕ್ರಮಗಳನ್ನು ವಿವರಿಸಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಭಾನುವಾರ ೧೧ ಗಂಟೆಗೆ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶವಾಸಿಗಳನ್ನುದ್ದೇಶಿಸಿ ತಮ್ಮ ಅನಿಸಿಕೆ ಹಾಗೂ ವಿಚಾರಧಾರೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೊ ಕಾರ್ಯಕ್ರಮದ ೧೧೪ನೇ ಸಂಚಿಕೆ ಇದಾಗಿದ್ದು, ಆಕಾಶವಾಣಿ, ದೂರದರ್ಶನ, ಎಐಆರ್ ನ್ಯೂಸ್ ವೆಬ್‌ಸೈಟ್, ನ್ಯೂಸ್ ಆನ್ ಏರ್ ಮೊಬೈಲ್ ಆಪ್, ಎಐಆರ್ ಯುಟ್ಯೂಬ್ ಚಾನೆಲ್, ಡಿಡಿ ನ್ಯೂಸ್ ಸೇರಿದಂತೆ ವಿವಿಧ ವಾಹಿನಿಗಳಲ್ಲಿ ಭಿತ್ತರಗೊಳ್ಳಲಿದೆ. ೩ನೇ ಅವಧಿಗೆ ಪ್ರಧಾನಿಯಾದ ನಂತರ ಪ್ರಧಾನಿ ನರೇಂದ್ರ ಮೋದಿ ಅವರ ೪ನೇ ಮನದ ಮಾತು ಇದಾಗಲಿದೆ.

<><*<><>*><>

ಲೆಬನಾನ್ ರಾಜಧಾನಿ ಬೀರುತ್‌ನಲ್ಲಿ ನಿನ್ನೆ ನಡೆದ ದಾಳಿಯಲ್ಲಿ ಹೆಜ್ಬುಲ್ಲಾ ನಾಯಕ ಹಸನ್ ನಸ್ರುಲ್ಲಾ ಹತನಾಗಿದ್ದಾನೆ ಎಂದು ಇಸ್ರೇಲ್ ರಕ್ಷಣಾ ಪಡೆಗಳು ತಿಳಿಸಿವೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಇಸ್ರೇಲ್ ರಕ್ಷಣಾ ಪಡೆ, ಹಸನ್ ನಸ್ರುಲ್ಲಾ ಹಾಗೂ ಇತರೆ ಹೆಜ್ಬುಲ್ಲಾ ಕಮಾಂಡರ್‌ಗಳನ್ನು ಗುರಿಯಾಗಿಸಿಕೊಂಡು ಬೀರುತ್ ಮೇಲೆ ನಿನ್ನೆ ತಡರಾತ್ರಿ ವಾಯುದಾಳಿ ನಡೆಸಲಾಯಿತು. ಈ ವೇಳೆ ಹೆಜ್ಬುಲ್ಲಾ ನಾಯಕ ಹಸನ್ ನಸ್ರುಲ್ಲಾ ಮೃತಪಟ್ಟಿದ್ದಾನೆ ಎಂದು ಮಾಹಿತಿ ನೀಡಿದೆ. ಈ ವಿಚಾರವನ್ನು ಹೆಜ್ಬುಲ್ಲಾ ಕೂಡ ದೃಢಪಡಿಸಿದೆ. ಇದೇ ವೇಳೆ ದಾಳಿಯಲ್ಲಿ ಹಿಜ್ಬೊಲ್ಲಾದ ದಕ್ಷಿಣ ವಿಭಾಗದ ಕಮಾಂಡರ್ ಅಲಿ ಕರ್ಕಿ ಹಾಗೂ ಇತರೆ ಹೆಜ್ಬೊಲ್ಲಾ ಕಮಾಂಡರ್‌ಗಳು ಕೂಡು ಹತರಾಗಿದ್ದಾರೆ. ಇಸ್ರೇಲಿ ಯುದ್ಧ ವಿಮಾನಗಳು, ಗಡಿಯುದ್ದಕ್ಕೂ ಹಿಜ್ಬುಲ್ಲಾ ಶಿಬಿರಗಳ ಮೇಲೆ ತಮ್ಮ ಬಾಂಬ್ ದಾಳಿಯನ್ನು ತೀವ್ರಗೊಳಿಸಿವೆ. ಹಿಜ್ಬುಲ್ಲಾ ನಾಯಕರನ್ನು ಗುರಿಯಾಗಿಸಿಕೊಂಡು ದಾಳಿ ಮುಂದುವರಿಯುತ್ತದೆ ಎಂದು ಇಸ್ರೇಲ್ ಹೇಳಿದೆ. ಏತನ್ಮಧ್ಯೆ, ಸಂಘರ್ಷದಿಂದಾಗಿ ಸಾವಿರಾರು ನಾಗರಿಕರು ಈಗಾಗಲೇ ಸ್ಥಳಾಂತರಗೊಂಡಿದ್ದಾರೆ. ಅನೇಕರು ನೆರೆಯ ಸಿರಿಯಾಕ್ಕೆ ಪಲಾಯನ ಮಾಡುತ್ತಿದ್ದಾರೆ ಎಂದು ಲೆಬನಾನ್ ಅಧಿಕಾರಿಗಳು ಹೇಳಿದ್ದಾರೆ.

<><*<><>*><>

ಕರ್ನಾಟಕದಲ್ಲಿ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಪಕ್ಷವನ್ನು ಬಿಜೆಪಿ ಟೀಕಿಸಿದೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ವಕ್ತಾರ ಸುದಾಂಶು ತ್ರಿವೇದಿ, ಮುಡಾ ಹಗರಣದಲ್ಲಿ ಕರ್ನಾಟಕ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕುಟುಂಬದವರು ಸರ್ಕಾರಿ ಪ್ರಾಧಿಕಾರ ಮತ್ತು ಭೂಮಿಯನ್ನು ದುರಪಯೋಗಪಡಿಸಿಕೊಂಡು ದೊಡ್ಡ ಪ್ರಮಾಣದ ಆಸ್ತಿಯನ್ನು ಹೊಂದಿದ್ದಾರೆ ಎಂದು ಆರೋಪಿಸಿದರು. ಹಗರಣದ ಆರೋಪಿ ಪರ ಕಾಂಗ್ರೆಸ್ ಹೈಕಮಾಂಡ್ ನಿಂತಿದೆ ಎಂದು ಸುದಾಂಶು ತ್ರಿವೇದಿ ದೂರಿದ್ದಾರೆ.

<><*<><>*><>

ಪ್ರಸ್ತುತ ಭಾರತವು ೧೪೪ ಮಿಲಿಯನ್ ಟನ್ ಉತ್ಪಾದನೆಯೊಂದಿಗೆ ಎರಡನೇ ಅತಿದೊಡ್ಡ ಉಕ್ಕು ಉತ್ಪಾದಕ ರಾಷ್ಟ್ರವಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆಗಳ ರಾಜ್ಯ ಸಚಿವ ಭೂಪತಿರಾಜು ಶ್ರೀನಿವಾಸ ಹೇಳಿದ್ದಾರೆ. ದೆಹಲಿಯಲ್ಲಿ ಹಸಿರು ಉಕ್ಕಿನ ಉತ್ಪಾದನೆಯ ಕುರಿತು ಮೂರು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಉಕ್ಕಿನ ಕ್ಷೇತ್ರದಲ್ಲಿ ತಾಂತ್ರಿಕ ಆವಿಷ್ಕಾರ ಮತ್ತು ಸಾಮಗ್ರಿಗಳ ಕ್ಷಮತೆಯನ್ನು ಶ್ಲಾಘಿಸಿದರು. ಇದು ಜಾಗತಿಕ ಉಕ್ಕಿನ ಉತ್ಪಾದನೆಯನ್ನು ೨ ಬಿಲಿಯನ್ ಟನ್‌ಗಳಿಗೆ ತಲುಪಿಸಿದೆ. ಉಕ್ಕಿನ ಕ್ಷೇತ್ರದ ಭವಿಷ್ಯವನ್ನು ಡಿಜಿಟಲೀಕರಣ ಮತ್ತು ಸುಸ್ಥಿರ ಉಕ್ಕಿನ ಉತ್ಪಾದನೆಯ ಮೇಲೆ ಹೊರಸೂಸುವಿಕೆಯ ಮಟ್ಟವನ್ನು ಕಡಿಮೆ ಮಾಡಲು ಪ್ರಯತ್ನಿಸಲಾಗುವುದು ಎಂದು ಶ್ರೀನಿವಾಸ ತಿಳಿಸಿದರು.

**<><*<><>*><>**

ದೇಶದ ಕೈಮಗ್ಗ ಮತ್ತು ಕರಕುಶಲ ವಸ್ತುಗಳ ರಫ್ತು ಪ್ರಮಾಣವನ್ನು ೬೦ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸುವ ಗುರಿಯನ್ನು ತಮ್ಮ ಇಲಾಖೆ ಹೊಂದಿದೆ ಎಂದು ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಹೇಳಿದ್ದಾರೆ. ಬಿಹಾರದ ಉಪೇಂದ್ರ ಮಹಾರಥಿ ಶಿಲ್ಪ ಸಂಸ್ಥಾನದಲ್ಲಿ ಕರಕುಶಲ ವಸ್ತುಗಳ ರಫ್ತು ಉತ್ತೇಜನಾ ಮಂಡಳಿಯ ಕಚೇರಿ ಉದ್ಘಾಟನೆ ನಂತರ ಪಾಟ್ನಾದಲ್ಲಿ ನಡೆದ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಕೈಮಗ್ಗ ಮತ್ತು ಕರಕುಶಲ ವಸ್ತುಗಳ ರಫ್ತಿನ ಪ್ರಮಾಣವು ೪೫ ಸಾವಿರ ಕೋಟಿ ರೂಪಾಯಿಗಳಾಗಿದ್ದು, ಪ್ರಚಾರ, ವಿತ್ತೀಯ ಸಹಾಯ ಮತ್ತು ತರಬೇತಿಯ ಮೂಲಕ ಮತ್ತಷ್ಟು ಹೆಚ್ಚಿಸುವ ಅಗತ್ಯವಿದೆ ಎಂದರು. ಗ್ರಾಮೀಣ ಪ್ರದೇಶದ ಕರಕುಶಲ ವಸ್ತುಗಳನ್ನು ಯಶಸ್ವಿಗೊಳಿಸಲು ಕೃತಕಬುದ್ಧಿಮತ್ತೆ ಮತ್ತು ಇಡಿ ಯಂತಹ ಹೊಸ ತಂತ್ರಜ್ಞಾನಗಳ ಅಳವಡಿಕೆ ಅಗತ್ಯವಿದೆ. ಕುಶಲಕರ್ಮಿಗಳ ಉತ್ಪನ್ನಗಳ ರಫ್ತು ಹೆಚ್ಚಿಸಬೇಕಾದರೆ, ಜಿಐ ಪ್ರಮಾಣೀಕೃತ ಉತ್ಪನ್ನಗಳ ಸಂಖ್ಯೆಯನ್ನು ಹೆಚ್ಚಿಸಬೇಕು ಎಂದು ಗಿರಿರಾಜ್ ಸಿಂಗ್ ಹೇಳಿದರು.

**<><*<><>*><>**

ಜಮ್ಮು ಮತ್ತು ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರು ಇಂದು ಜಮ್ಮುವಿನ ರಾಜಭವನದಲ್ಲಿ, ಪ್ಯಾರಿಸ್ ೨೦೨೪ ಪ್ಯಾರಾಲಿಂಪಿಕ್ಸ್ ಕಂಚಿನ ಪದಕ ವಿಜೇತರಾದ ಶೀತಲ್ ದೇವಿ ಮತ್ತು ರಾಕೇಶ್ ಕುಮಾರ್ ಅವರನ್ನು ಸನ್ಮಾನಿಸಿದರು. ಪ್ಯಾರಿಸ್ ೨೦೨೪ ಪ್ಯಾರಾಲಿಂಪಿಕ್ಸ್‌ನಲ್ಲಿ ಅದ್ಭುತ ಪ್ರದರ್ಶನಕ್ಕಾಗಿ ಜಮ್ಮು ಮತ್ತು ಕಾಶ್ಮೀರದ ಪ್ಯಾರಾ ಬಿಲ್ಲುಗಾರರನ್ನು ಲೆಫ್ಟಿನೆಂಟ್ ಗವರ್ನರ್ ಅಭಿನಂದಿಸಿದರು.

**<><*<><>*><>**

ಚೀನಾದಲ್ಲಿ ನಡೆಯುತ್ತಿರುವ ಮೆಕಾವ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯ ಮಹಿಳೆಯರ ಡಬಲ್ಸ್ ವಿಭಾಗದ ಸೆಮಿಫೈನಲ್ಸ್ ಪಂದ್ಯದಲ್ಲಿಂದು ಚೈನೀಸ್ ತೈಪೆಯ ಹಂಗ್ ಎನ್-ತ್ಸು ಮತ್ತು ಹ್ಸೀಹ್ ಪೀ ಶಾನ್ ಜೋಡಿಯ ವಿರುದ್ಧ ಭಾರತದ ತ್ರೀಸಾ ಜೊಲ್ಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿ ಪರಾಭವಗೊಂಡಿದೆ. ೨೧-೧೭, ೧೬-೨೧, ೨೧-೧೧ ಸೆಟ್‌ಗಳಿಂದ ಸೋತ ತ್ರೀಸಾ- ಗಾಯತ್ರಿ ಜೋಡಿಯು ಟೂರ್ನಿಯಿಂದ ಹೊರಬಿದ್ದಿದೆ.

**<><*<><>*><>**

ಕಾನ್ಪುರದ ಗ್ರೀನ್ ಪಾರ್ಕ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ಬಾಂಗ್ಲಾದೇಶ ನಡುವಿನ ಅಂತಿಮ ಟೆಸ್ಟ್ ಕ್ರಿಕೆಟ್ ಪಂದ್ಯದ ಎರಡನೇ ದಿನವಾದ ಇಂದು ಮಳೆಯಿಂದ ಆಟ ಸಾಧ್ಯವಾಗಲಿಲ್ಲ. ಮೊದಲ ದಿನದಂದು ಪಂದ್ಯದ ಅಂತ್ಯದ ವೇಳೆಗೆ ಬಾಂಗ್ಲಾದೇಶ ೩ ವಿಕೆಟ್ ನಷ್ಟಕ್ಕೆ ೧೦೭ ರನ್ ಗಳಿಸಿತ್ತು. ಮೊದಲ ಟೆಸ್ಟ್ ಪಂದ್ಯದಲ್ಲಿ ೨೮೦ ರನ್‌ಗಳಿಂದ ಭರ್ಜರಿ ಜಯಗಳಿಸಿದ ಭಾರತ, ೧-೦ ಅಂತರದಿಂದ ಮುನ್ನಡೆಯಲ್ಲಿದೆ.

<><*<><>*><>

ಹರಿಯಾಣದ ಸೋನಿಪತ್‌ನಲ್ಲಿನ ಅಕ್ರಮ ಪಟಾಕಿ ಕಾರ್ಖಾನೆಯೊಂದರಲ್ಲಿ ಇಂದು ಸಂಭವಿಸಿದ ಭಾರಿ ಅಗ್ನಿ ಅವಘಡದಲ್ಲಿ ಮೂರು ಮಂದಿ ಮೃತಪಟ್ಟಿದ್ದಾರೆ. ಕಾರ್ಖಾನೆಯಿಂದ ದೊಡ್ಡ ಸ್ಫೋಟದ ಸದ್ದು ಕೇಳಿಬಂದಿದ್ದು, ಸಮೀಪದ ಮನೆಗಳ ಗೋಡೆಗಳಲ್ಲಿ ಬಿರುಕು ಉಂಟಾಗಿದೆ ಎಂದು ನಮ್ಮ ಬಾತ್ಮಿದಾರರು ವರದಿ ಮಾಡಿದ್ದಾರೆ. ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>